ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸರಬರಾಜು

284(562); ಶ್ರೀ ಮಕಬುಲ್ ಎಸ್. ಬಾಗವಾನ್ (ಬಿಜಾಪುರ ನಗರ)

ಅ) ವಿಜಾಪುರ ಜಿಲ್ಲೆಯ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಿಂದುಳಿದ ವರ್ಗಗಳು ಹಾಗೂ ಅಲ್ಪ ಸಂಖ್ಯಾತರ ನಿಗಮಗಳು ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ಯೋಜನೆಯಡಿ ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕಿಸಲಾಗಿದೆಯೇ;

ಆ) ಬಾಕಿ ಉಳಿದ ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಯಾವಾಗ ಕಲ್ಪಿಸಲಾಗುವುದು;

ಇ) ಈಗಾಗಲೇ ಎಷ್ಟು ವಿದ್ಯುತ್ ಸಂಪರ್ಕ ಕೊಡಲಾಗಿದೆ; ಉಳಿದಿರುವ ವಿದ್ಯುತ್ ಸಂಪರ್ಕಗಳನ್ನು ಯಾವಾಗ ನೀಡಲಾಗುವುದು; ಜಿಲ್ಲೆಯ ಪೂರ್ತಿ ಮಾಹಿತಿ ನೀಡುವುದು?

ಶ್ರೀ ಡಿ.ಕೆ. ಶಿವಕುಮಾರ್ (ಮಾನ್ಯ ಇಂಧನ ಸಚಿವರು)

ಅ) ಹೌದು. ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಆ) ಮತ್ತು ಇ) ವಿಜಾಪುರ ಜಿಲ್ಲೆಯಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಬಾಕಿ ಉಳಿದಿರುವ ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಆರ್‌ಸಿ (Rate Contract) ಆಧಾರದ ಮೇಲೆ ದಿನಾಂಕ:12.2.2013 ರಂದು ಟೆಂಡರ್ ಕರೆಯಲಾಗಿದೆ. ನಾಲ್ಕು ಅಭಿವೃದ್ಧಿ ನಿಗಮಗಳು ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ಯೋಜನೆಯಡಿ 2013–14ನೇ ಸಾಲಿನಲ್ಲಿ ಹಾಗೂ 2014–15 ರ ಮೇ ಅಂತ್ಯದವರೆಗೆ ಒಟ್ಟು 1119 ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿರುತ್ತದೆ. ಬಾಕಿ ಉಳಿದ 779 ಸಂಖ್ಯೆ ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಒದಗಿಸುವ ಕಾಮಗಾರಿಯು ಪ್ರಗತಿಯಲ್ಲಿದ್ದು, ಶೀಘ್ರವಾಗಿ ಪೂರ್ಣಗೊಳಿಸಲಾಗುವುದು.

ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಮಕಬೂಲ್ ಎಸ್. ಬಾಗವಾನ್ (ಬಿಜಾಪುರ ನಗರ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 562ಕ್ಕೆ ಅನುಬಂಧ

ವಿಜಾಪುರ ಜಿಲ್ಲೆಯಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಿಂದುಳಿದ ವರ್ಗಗಳು ಹಾಗೂ ಅಲ್ಪ ಸಂಖ್ಯಾತರ ನಿಗಮಗಳು ಅನುಷ್ಠಾನಗೊಳಿಸುತ್ತಿರುವ ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಪಡೆದಿರುವ ವಿವರ:

ಕ್ರ. ಸಂ.	ವಿಭಾಗಗಳು	ಸಂಪರ್ಕ ಪಡೆದಿರುವ ಫಲಾನುಭವಿಗಳ ಸಂಖ್ಯೆ										ಮೇ-2014ರ ಅಂತ್ಯದವರೆಗೆ ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ
		2013-14					2014-15 (ಮೇ-2014ರ ಅಂತ್ಯಕ್ಕೆ)					
		ಪರಿಶಿಷ್ಟ ಜಾತಿ	ಪರಿಶಿಷ್ಟ ಪಂಗಡ	ಹಿಂದುಳಿದ ವರ್ಗಗಳು	ಅಲ್ಪ ಸಂಖ್ಯಾತರು	ಒಟ್ಟು	ಪರಿಶಿಷ್ಟ ಜಾತಿ	ಪರಿಶಿಷ್ಟ ಪಂಗಡ	ಹಿಂದುಳಿದ ವರ್ಗಗಳು	ಅಲ್ಪ ಸಂಖ್ಯಾತರು	ಒಟ್ಟು	
1	ಬಿಜಾಪೂರ	258	10	76	37	381	0	0	10	2	12	133
2	ಇಂಡಿ	277	22	57	25	381	18	0	10	0	28	348
3	ಬಸವನಬಾಗೇವಾಡಿ	186	16	77	38	317	0	0	0	0	0	298
ಒಟ್ಟು		721	48	210	100	1,079	18	0	20	2	40	779